## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1297 (1519) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 17.03.2026 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಹೆಚ್ಚು ಸಂಖ್ಯೆಯ ಯುವಕ/ಯುವತಿಯರು ಶಿಕ್ಷಣ ಪಡೆದು ನಿರುದ್ಯೋಗ ಸಮಸ್ಯೆಯಿಂದಾಗಿ ಉದ್ಯೋಗಕ್ಕಾಗಿ ನೆರೆಯ ನಗರ/ ಮಹಾನಗರ/ರಾಜ್ಯಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | 2025 ರ ಜಾಗತಿಕ ಬಂಡವಾಳ ಹೂಡಿಕೆ ಸಮಾವೇಶದಲ್ಲಿ ರಾಯಚೂರು ಜಿಲ್ಲೆಗೆ ಒಂದು ಕೈಗಾರಿಕಾ ಘಟಕ ಸ್ಥಾಪನೆಗೆ ರೂ.150.00 ಕೋಟಿ ಹೂಡಿಕೆಗೆ ಒಪ್ಪಂದವಾಗಿದ್ದು, ಇದರಿಂದ ನೇರವಾಗಿ 125 ಹಾಗೂ ಪರೋಕ್ಷವಾಗಿ 100 ನಿರುದ್ಯೋಗಿ ಯುವಕ/ಯುವತಿಯರಿಗೆ ಉದ್ಯೋಗ ದೊರಕಲಿದೆ.<br><br>ರಾಜ್ಯ ಸರ್ಕಾರವು ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ಕಾಲಕಾಲಕ್ಕೆ ಅನ್ವಯಿಸುವ ಕೈಗಾರಿಕಾ ನೀತಿಗಳನ್ನು ಹೊರತರುತ್ತದೆ. ಅದರಂತೆ, ಪ್ರಸ್ತುತ ನೂತನ ಕೈಗಾರಿಕಾ ನೀತಿ 2025-30ನ್ನು ಜಾರಿಗೆ ತರಲಾಗಿದ್ದು, ಬಂಡವಾಳ ಹೂಡಿಕೆ ಆಕರ್ಷಿಸಲು 2025-30 ಕೈಗಾರಿಕಾ ನೀತಿಯು ರಾಜ್ಯದ ಸಮಗ್ರ ಅಭಿವೃದ್ಧಿ ಗುರಿಯೊಂದಿಗೆ ಬೆಂಗಳೂರಿನಿಂದ ಹೊರಗಡೆ ಕೈಗಾರಿಕೆಯಲ್ಲಿ ಹಿಂದುಳಿದ ಪ್ರದೇಶಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.<br><br>ಸಿಂಧನೂರು ತಾಲ್ಲೂಕನ್ನು ವಲಯ-1 ರಲ್ಲಿ ಗುರುತಿಸಿದ್ದು, ಹೆಚ್ಚಿನ ರಿಯಾಯಿತಿ ಹಾಗೂ ಪ್ರೋತ್ಸಾಹಕಗಳನ್ನು ಇಲ್ಲಿ ಸ್ಥಾಪಿಸುವ ಕೈಗಾರಿಕೆಗಳಿಗೆ ನೀಡಲಾಗುತ್ತಿದೆ.<br><br>ಸಿಂಧನೂರು ತಾಲ್ಲೂಕಿನಲ್ಲಿ ಕೈಗಾರಿಕೆಗಳಿಂದ ಹೊಸ ಕೈಗಾರಿಕಾ ಪ್ರದೇಶ ಸ್ಥಾಪನೆಗೆ ಬೇಡಿಕೆ ಬಂದಲ್ಲಿ, ಅದನ್ನು ನಿಯಮಾನುಸಾರ ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುತ್ತದೆ. |
| ಆ | ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರವು ಸಿಂಧನೂರು ತಾಲ್ಲೂಕಿನಲ್ಲಿ ಜಮೀನನ್ನು ಖರೀದಿಸಿ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸುವುದೇ; | |
| ಇ | ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರವು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸುವ ಹಿತದೃಷ್ಟಿಯಿಂದ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸುತ್ತದೆ? | |

**ಸಿಐ 65 ಎಸ್‌ಪಿಐ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು